**ಪಲ್ಲವಿ ಆಕುರಾತಿ, ಭಾ.ಆ.ಸೇ**
ನಿರ್ದೇಶಕರು
ಮಕ್ಕಳ ರಕ್ಷಣಾ ನಿರ್ದೇಶನಾಲಯ

ಮಕ್ಕಳ ರಕ್ಷಣಾ ನಿರ್ದೇಶನಾಲಯ
ವಿಶ್ವೇಶ್ವರಯ್ಯ ಕೇಂದ್ರ, ಚಿಕ್ಕಗೋಪುರ
3ನೇ ಮಹಡಿ, ಡಾ. ಬಿ.ಆರ್. ಅಂಬೇಡ್ಕರ್ ವೀದಿ
ಬೆಂಗಳೂರು-560001
✆ : 080-22867381/82/83
ಇ-ಮೇಲ್ : icps.kar@gmail.com

**ಸಂಖೆ:ಮರನಿ/ಮರ/ಮ.ಪಾ.ಸಂ-59/2021-22** **ದಿನಾಂಕ:13.09.2021**

ನಿರ್ದೇಶಕರು,
ತೋಟಗಾರಿಕೆ ಇಲಾಖೆ
ಬೆಂಗಳೂರು.

ಮಾನ್ಯರೇ,

ವಿಷಯ: ಬಾಲನ್ಯಾಯ(ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ, 2015ರ ಅಡಿಯಲ್ಲಿ ನೋಂದಾಯಿಸಲ್ಪಟ್ಟ ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿನ ಮಕ್ಕಳಿಗೆ ಕೈತೋಟ ಬೆಳೆಸುವುದರಲ್ಲಿ ಕೌಶಲ್ಯಾಭಿವೃದ್ಧಿ ನೀಡುವುದು ಹಾಗೂ ಮಕ್ಕಳ ಪಾಲನಾ ಸಂಸ್ಥೆಯ ಆವರಣವನ್ನು ತೋಟಗಾರಿಕೆ ಇಲಾಖೆಯ ಸಹಯೋಗದೊಂದಿಗೆ ಉತ್ತಮಗೊಳಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ, 2015ರನ್ವಯ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯಡಿ ಪಾಲನೆ ಮತ್ತು ರಕ್ಷಣೆ ಅಗತ್ಯವಿರುವ ಮಕ್ಕಳಿಗೆ ಹಾಗೂ ಕಾನೂನಿನೊಡನೆ ಸಂಘರ್ಷದಲ್ಲಿರುವ ಮಕ್ಕಳಿಗೆ ಪುನರ್ವಸತಿ ಮತ್ತು ರಕ್ಷಣೆಯನ್ನು ಒದಗಿಸಲಾಗುತ್ತಿದೆ.

ಹೀಗೆ ಕರ್ನಾಟಕ ರಾಜ್ಯಾದ್ಯಂತ ಇರುವ ಒಟ್ಟು 993 ನೋಂದಾಯಿತ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ 97 ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳು ಈ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿವೆ. ಇವುಗಳಲ್ಲಿ ಸುಮಾರು 63 ಸಂಸ್ಥೆಗಳು ಸ್ವಂತ ಕಟ್ಟಡವನ್ನು ಹೊಂದಿರುತ್ತವೆ. ಸ್ವಂತ ಕಟ್ಟಡ ಇದ್ದು ಸಾಕಷ್ಟು ಸ್ಥಳಾವಕಾಶವಿರುವ ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿರುವ ಮಕ್ಕಳಿಗೆ ಕೈತೋಟ, ಜೇನು ಸಾಕಾಣಿಕೆ, ಅಣಬೆ ಬೆಳೆಯುವುದು, ತರಕಾರಿ ಬೆಳೆಸುವುದು, ಹೂ ತೋಟ ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದಂತೆ ಕೌಶಲ್ಯಾಭಿವೃದ್ಧಿ ಪಡೆಯಲು ಮತ್ತು ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿನ ಪ್ರಾಂಗಣವನ್ನು ಈ ರೀತಿಯ ಕೈತೋಟ, ಹೂವು ಮತ್ತು ಹಣ್ಣಿನ ಗಿಡಗಳನ್ನು ಬೆಳೆಸುವುದರ ಮೂಲಕ ಅಹಲ್ಲಾದಕರ ವಾತಾವರಣದ ಜೊತೆಗೆ ಮಕ್ಕಳಿಗೆ ಪೋಷಕಾಂಶವಿರುವ ಹಾಗೂ ಕಬ್ಬಿಣಾಂಶವಿರುವ ಆಹಾರವನ್ನು ಒದಗಿಸಲು ಕೋರಲಾಗಿದೆ.

ಇದರಿಂದ ಮಕ್ಕಳಿಗೆ ಒಂದು ಕಡೆ ಉತ್ತಮ ಆರೋಗ್ಯದ ಜೊತೆಗೆ ಕೌಶಲ್ಯಾಭಿವೃದ್ಧಿಯೂ ಸಹ ದೊರಕಿದಂತಾಗುತ್ತದೆ. ಇದರಿಂದ ಮಕ್ಕಳು ಮಾನಸಿಕ ಕ್ಷೋಭೆಯಿಂದ ಹೊರಬರಲು ಸಾಧ್ಯವಾಗುವುದರ ಜೊತೆಗೆ ಇಡೀ ಮಕ್ಕಳ ಪಾಲನಾ ಸಂಸ್ಥೆಯ ವಾತಾವರಣವೇ ಸಕಾರಾತ್ಮಕ ಬದಲಾವಣೆಗೆ ಒಳಗಾಗುತ್ತದೆ. ಇದನ್ನು ಎಲ್ಲಾ ನೋಂದಾಯಿತ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಮಾಡಬೇಕಾಗಿದ್ದು, ಮೊದಲ ಹಂತದಲ್ಲಿ ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಮಾಡಬೇಕಾಗಿದೆ.

ಈ ಹಿನ್ನೆಲೆಯಲ್ಲಿ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ, 2015ರ ಅಡಿಯಲ್ಲಿ ನೋಂದಾಯಿಸಲ್ಪಟ್ಟ ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಯ ಮಕ್ಕಳಿಗೆ ತೋಟಗಾರಿಕೆ ಇಲಾಖೆಯಿಂದ ಒದಗಿಸುವ **ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಒದಗಿಸಲು** ಅನುವಾಗುವಂತೆ ಹಾಗೂ ಆಯಾ ನೋಂದಾಯಿತ ಮಕ್ಕಳ ಪಾಲನಾ **ಸಂಸ್ಥೆಯ ಪ್ರಾಂಗಣವನ್ನು ಸುಂದರಗೊಳಿಸಲು ಒಂದು ದೀರ್ಘಕಾಲಿಕ ಹೊಸ ಯೋಜನೆಯನ್ನು** ತಮ್ಮ ಇಲಾಖೆಯಿಂದ ಹಮ್ಮಿಕೊಂಡು ಅನುಷ್ಠಾನಗೊಳಿಸಲು ಕೋರಲಾಗಿದೆ. ಈ ಕುರಿತು ಪ್ರಗತಿಯನ್ನು ಈ ಕಛೇರಿಗೆ ಮಾಹಿತಿಗಾಗಿ ಒದಗಿಸಲು ಹಾಗೂ ಈ ಕುರಿತು ಎರಡೂ ಇಲಾಖೆಗಳ ನಡುವೆ ಸಹಕಾರ-ಸಮನ್ವಯಕ್ಕಾಗಿ **ಒಬ್ಬ ನೋಡಲ್ ಅಧಿಕಾರಿಯನ್ನು** ನೇಮಕ ಮಾಡಲೂ ಸಹಾ ಕೋರಿದೆ.

ತಮ್ಮ ವಿಶ್ವಾಸಿ,
13.09.2021
ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ,
ಬೆಂಗಳೂರು.